ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 14–9–2017

## ಪತ್ರಿಕಾ ಆಮಂತ್ರಣ

1. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಆಯೋಜಿಸಿರುವ "ಮುಂದಿನ ಪೀಳಿಗೆಯ ತಳಿ ಅಭಿವೃದ್ಧಿಶಾಸ್ತ್ರ – ರಾಷ್ಟ್ರೀಯ ಸಮ್ಮೇಳನ" ಉದ್ಘಾಟನಾ ಸಮಾರಂಭ:

ಮುಖ್ಯ ಅತಿಥಿ:

ಡಾ. ಕುಲ್‌ದೀಪ್ ಸಿಂಗ್, ನಿರ್ದೇಶಕರು, ರಾಷ್ಟ್ರೀಯ ಸಸ್ಯ ಅಭಿವೃದ್ಧಿ ಸಂಪನ್ಮೂಲಗಳ ಬ್ಯೂರೋ, ನವದೆಹಲಿ.

ಅಧ್ಯಕ್ಷತೆ:

ಡಾ. ಹೆಚ್. ಶಿವಣ್ಣ, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

ದಿನಾಂಕ: 15–098–2017 ಶುಕ್ರವಾರ, ಸಮಯ : ಬೆಳಿಗ್ಗೆ 9–00 ಗಂಟೆಗೆ

ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿ.ಕೆ.ವಿ.ಕೆ) ನಾರ್ತ್ ಬ್ಲಾಕ್ ಸಭಾಂಗಣ, ಬೆಂಗಳೂರು.

ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 8.30 ಗಂಟೆಗೆ ನಗರದ ಕಬ್ಬನ್ ಉದ್ಯಾನವನದಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ : ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು,
ಮೊಬೈಲ್ ಸಂಖ್ಯೆ : 9972035456

2. ನೆಫ್ರೋ–ಯುರಾಲಜಿ ಸಂಸ್ಥೆಯ ಅನೆಕ್ಸ್ ಕಟ್ಟಡದ ಶಂಕುಸ್ಥಾಪನೆ ಮತ್ತು ಬಿ.ಎಂ.ಸಿ.ಆರ್. ಐ. ನ ವಿವಿಧ ಕಟ್ಟಡಗಳ ಉದ್ಘಾಟನಾ ಸಮಾರಂಭ

**ಶಂಕುಸ್ಥಾಪನೆ ಮತ್ತು ಉದ್ಘಾಟನೆ:**
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಅಧ್ಯಕ್ಷತೆ:**
ಬಿ. ಜೆಡ್. ಜಮೀರ್ ಅಹಮ್ಮದ್ ಖಾನ್, ಶಾಸಕರು, ಚಾಮರಾಜಪೇಟೆ ಕ್ಷೇತ್ರ.

ದಿನಾಂಕ: 15-098-2017 ಶುಕ್ರವಾರ, ಸಮಯ : ಮಧ್ಯಾಹ್ನ 12.00 ಗಂಟೆಗೆ
ಸ್ಥಳ: ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು.

## ಪತ್ರಕರ್ತರ ಗಮನಕ್ಕೆ

## 2017-18ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನೊಂದಾಯಿತ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗೆ ಅರ್ಜಿ ಆಹ್ವಾನ

ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ ಮೀಡಿಯಾ ಕಿಟ್ ವಿತರಿಸುವ ಯೋಜನೆಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು, ಇಲ್ಲವೆ ಇಲಾಖೆಯ ವೆಬ್‌ಸೈಟ್ **"karnatakainformation.gov.in"**ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ನೊಂದಾಯಿತ ಪತ್ರಕರ್ತರ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪ ಜಾತಿ), ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿಮಾಡಿ ಸ್ವ-ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು. ಸದರಿ ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ

ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: **27-09-2017** ರ ಸಂಜೆ **5.00** ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, # 17,, "ವಾರ್ತಾಸೌಧ", ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – **560 001** ಇವರಿಗೆ ಸಲ್ಲಿಸಬೇಕು. ಸದರಿ ಲಕೋಟೆಯ ಮೇಲ್ಭಾಗದಲ್ಲಿ "ನೊಂದಾಯಿತ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗಾಗಿ ಅರ್ಜಿ" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ **080-22028037/87** ರ ಮೂಲಕ ಸಂಪರ್ಕಿಸಬಹುದು.

## ಪತ್ರಿಕಾ ಪ್ರಕಟಣೆ

<u>ಸಂಖ್ಯೆ 63/190</u>

## <u>ಮಕ್ಕಳ ಹಕ್ಕುಗಳನ್ನು ಒದಗಿಸುವುದು ವಿಶ್ವದ ಎಲ್ಲಾ ಸರ್ಕಾರಗಳ ಮತ್ತು ಪ್ರಜೆಗಳ ಆದ್ಯ ಕರ್ತವ್ಯವಾಗಿದೆ – ಸಚಿವೆ ಉಮಾಶ್ರೀ</u>

ಬೆಂಗಳೂರು, ಸೆಪ್ಟೆಂಬರ್ 14 ( ಕರ್ನಾಟಕ ವಾರ್ತೆ) :

ಪೌಷ್ಠಿಕ ಆಹಾರ, ಆರೋಗ್ಯ, ಶಿಕ್ಷಣ, ಸ್ವಾತಂತ್ರ್ಯ, ಚಿಂತನೆ, ಮನ್ನಣೆಯನ್ನು ಮಕ್ಕಳಿಗೆ ನೀಡುವ ಮೂಲಕ ಅವರನ್ನು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢಗೊಳಿಸುವುದು ಮತ್ತು ಈ ಮೂಲಕ ಮಕ್ಕಳಿಗೆ ಅವರ ಹಕ್ಕುಗಳನ್ನು ಒದಗಿಸುವುದು ವಿಶ್ವದ ಎಲ್ಲಾ ಸರ್ಕಾರಗಳ ಮತ್ತು ಪ್ರಜೆಗಳ ಆದ್ಯ ಕರ್ತವ್ಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಕರೆ ನೀಡಿದರು.

ಕರ್ನಾಟಕ ವಿಧಾನಮಂಡಲ ಮತ್ತು ಮಕ್ಕಳ ಹಕ್ಕುಗಳ ಶಾಸಕರ ವೇದಿಕೆ ಇಂದು ವಿಕಾಸಸೌಧದ ಸಭಾಂಗಣದಲ್ಲಿ ಏರ್ಪಡಿಸಿದ್ದ "ಮಕ್ಕಳ ಹಕ್ಕುಗಳ ಕುರಿತ ಶಾಸಕರ ಪ್ರಾದೇಶಿಕ ಸಮ್ಮೇಳನ 2017 ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು, ಮಕ್ಕಳ ಹಕ್ಕುಗಳನ್ನು ಅವರಿಗೆ ಒದಗಿಸಲು ಕರ್ನಾಟಕ ಸರ್ಕಾರ ಸಾಕಷ್ಟು ಶ್ರಮಿಸುತ್ತಿದ್ದು ಮಕ್ಕಳ ಹಕ್ಕುಗಳ ರಕ್ಷಣೆ ಕಾರ್ಯಕ್ರಮ ರೂಪಿಸಲು ಸಾಕಷ್ಟು ಅನುದಾನವನ್ನು ನೀಡಿದೆ ಎಂದರು.

ರಾಜ್ಯ ಮಕ್ಕಳ ಆಯೋಗ ಮತ್ತು ಸರ್ಕಾರೇತರ ಸಂಸ್ಥೆಗಳು ಮಕ್ಕಳ ಹಕ್ಕುಗಳ ರಕ್ಷಣೆ ಕಾರ್ಯದಲ್ಲಿ ರಾಜ್ಯ ಸರ್ಕಾರದ ಜೊತೆ ಕೈಜೋಡಿಸಿಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿರುವುದು ಸಂತಸದ ವಿಷಯವೆಂದರು.

ಮಕ್ಕಳನ್ನು ಅಪೌಷ್ಠಿಕತೆಯಿಂದ ದೂರಮಾಡಲು ರಾಜ್ಯ ಸರ್ಕಾರವು ಕ್ಷೀರಭಾಗ್ಯ ಯೋಜನೆ ಮೂಲಕ ಕೆನೆಭರಿತ ಹಾಲನ್ನು ಮಕ್ಕಳಿಗೆ ನೀಡುತ್ತಿದ್ದು, **2011** ರಲ್ಲಿ ಶೇಕಡ **2.84** ರಷ್ಟು ಇದ್ದ ಮಕ್ಕಳ ಅಪೌಷ್ಠಿಕತೆ ಪ್ರಮಾಣ **2017** ರ ಜುಲೈ ಅಂತ್ಯಕ್ಕೆ ಶೇ **0.46** ಗೆ ಇಳಿದಿದ್ದು ಇದು ಉತ್ತಮ ಸಾಧನೆ ಎಂದರು.

'ದತ್ತು ಪ್ರಕ್ರಿಯೆ'ಯಲ್ಲಿ ರಾಜ್ಯ ಸರ್ಕಾರ ದೇಶದಲ್ಲಿಯೇ **2**ನೇ ಸ್ಥಾನದಲ್ಲಿದ್ದು ಈ ಮೂಲಕ ಅನಾಥ ಮಕ್ಕಳಿಗೆ ಉತ್ತಮ ಭವಿಷ್ಯವನ್ನು ಕಲ್ಪಿಸಲಾಗುತ್ತಿದೆ. ಅಂತೆಯೇ ತೊಟ್ಟಿಲು ಕಾರ್ಯಕ್ರಮದ ಮೂಲಕ ಅನಾಥ ಮಕ್ಕಳಿಗೆ ಉತ್ತಮ ಬಾಳು ನೀಡಲಾಗುತ್ತಿದೆ ಎಂದರು.

ಸರ್ಕಾರದ ಬಾಲಮಂದಿರಗಳಲ್ಲಿರುವ ಮಕ್ಕಳಿಗೆ ನಮ್ಮ ನಾಡಿನ ಸಂಸ್ಕೃತಿಯನ್ನು ಜಾನಪದ ಅಕಾಡೆಮಿಯ ಮೂಲಕ ಪರಿಚಯ ಮಾಡಿಕೊಡಲಾಗುತ್ತಿದ್ದು ಈ ಮೂಲಕ ಮಕ್ಕಳಲ್ಲಿ ಉತ್ತಮ ವ್ಯಕ್ತಿತ್ವವನ್ನು ರೂಪಿಸಲಾಗುತ್ತಿದೆ. ವಿಕಲಚೇತನ ಮಕ್ಕಳಿಗೆ ಶಿಷ್ಯವೇತನ, ವಿದ್ಯಾಭ್ಯಾಸವನ್ನು ಪರಿಣಾಮಕಾರಿಯಾಗಿ ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ ಎಂದರು.

ಬಾಲ್ಯ ವಿವಾಹ ಕಾಯ್ದೆಯನ್ನು ಪರಿಷ್ಕರಿಸಿ ರಾಷ್ಟ್ರಪತಿಗಳ ಅನುಮೋದನೆ ಕಳುಹಿಸಿದ ಕೀರ್ತಿ ನಮ್ಮ ರಾಜ್ಯಕ್ಕೆ ಸಲ್ಲುತ್ತಿದ್ದು, ಬಾಲ್ಯ ವಿವಾಹವನ್ನು ಮಾಡುವಂತಹ ಪೋಷಕರಿಗೆ ಎರಡು ವರ್ಷ ಶಿಕ್ಷೆಗೆ ನೂತನ ಕಾಯ್ದೆ ಅವಕಾಶ ಕಲ್ಪಿಸಿದ್ದು ಇದು ದೇಶಕ್ಕೆ ಮಾದರಿ ಕಾಯ್ದೆ ಎನಿಸಿದೆ ಎಂದರು.

ಕಾನೂನು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಮಾತನಾಡಿ, **6** ರಿಂದ **14** ವರ್ಷದ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ, ಅಪಾಯಕಾರಿ ಉದ್ಯೋಗಗಳಿಂದ ರಕ್ಷಣೆ, ಸಮಾನ ಅವಕಾಶ, ಅಸಮಾನತೆಗಳಿಂದ ರಕ್ಷಣೆ, ವೈಯಕ್ತಿಕ ಸ್ವಾತಂತ್ರ್ಯ, ಮಕ್ಕಳ ಕಳ್ಳಸಾಗಾಣಿಕೆಯಿಂದ ಮುಕ್ತಿ ಮುಂತಾದ ಮಕ್ಕಳ ಹಕ್ಕುಗಳನ್ನು ಒದಗಿಸುವುದು ನಮ್ಮೆಲ್ಲರ ಕರ್ತವ್ಯವಾಗಿದ್ದು, ಬದುಕುವ ಹಕ್ಕು, ರಕ್ಷಣೆಯ ಹಕ್ಕು, ಭಾಗವಹಿಸುವಿಕೆಯ ಹಕ್ಕು ಮತ್ತು ಸರ್ವಾಂಗೀಣ ಅಭಿವೃದ್ಧಿಯ ಹಕ್ಕುಗಳು ಮಕ್ಕಳಿಗೆ ಯಥಾವತ್ತಾಗಿ ಸಿಗಬೇಕು ಎಂದರು.

ಮಕ್ಕಳಲ್ಲಿ ಅಪೌಷ್ಠಿಕತೆ ಇತ್ತೀಚಿನ ದಿನಗಳಲ್ಲಿ ದೇಶದೆಲ್ಲೆಡೆ ಅತಿದೊಡ್ಡ ಸಮಸ್ಯೆಯಾಗಿದ್ದು, ಅಪೌಷ್ಠಿಕತೆಯನ್ನು ತಡೆಯುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪರಿಣಾಮಕಾರಿ ಯೋಜನೆಗಳನ್ನು ಜಾರಿಗೆ ತಂದಿದೆ ಎಂದರು.

ಯುನಿಸೆಫ್‌ನ ಮುಖ್ಯಸ್ಥೆ ಮಿಥೈಲ್ ರಸ್ಥಿ ಅವರು ಮಾತನಾಡಿ, ಯುನಿಸೆಫ್‌ನ 'ವಿಶ್ವದ ಮಕ್ಕಳ ಸ್ಥಿತಿಗತಿ **– 2016**' ರ ವರದಿಯ ಪ್ರಕಾರ ಮಕ್ಕಳ ಜೀವರಕ್ಷಣೆ, ಮಕ್ಕಳಿಗೆ ಉತ್ತಮ ಶಿಕ್ಷಣ, ಉತ್ತಮ ಜೀವನ ಒದಗಿಸುವಲ್ಲಿ ವಿಶ್ವದೆಲ್ಲೆಡೆ ಗಮನಾರ್ಹ ಪ್ರಗತಿಯನ್ನು ಸಾಧಿಸಲಾಗಿದೆ ಎಂದ ಅವರು, ಮಕ್ಕಳ ಬಾಲ್ಯವಸ್ಥೆ ಪ್ರಮುಖ ಘಟ್ಟವಾಗಿದ್ದು, ಈ ದಿಸೆಯಲ್ಲಿ ಹೆಚ್ಚಿನ ಗಮನ, ಸಂಪನ್ಮೂಲ ಮತ್ತು ಪರಿಶ್ರಮವನ್ನು ನಾವುಗಳು ಹಾಕಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ಮಾತನಾಡಿ, ಈ ಉದ್ದೇಶಿತ ಕಾರ್ಯಾಗಾರವು ಮಾಹಿತಿ ಹಂಚಿಕೆ ಮತ್ತು ಉತ್ತಮ ಆಚರಣೆಗಳನ್ನು

ಅಳವಡಿಸಿಕೊಳ್ಳಲು ಮತ್ತು ಮಕ್ಕಳ ಸ್ಥಿತಿಗಳನ್ನು ಚರ್ಚಿಸಿ ಆಯಾ ರಾಜ್ಯಗಳಲ್ಲಿ ಮಕ್ಕಳ ಹಕ್ಕುಗಳನ್ನು ಎತ್ತಿ ಹಿಡಿಯಲು ಕ್ರಿಯಾ ಯೋಜನೆಯನ್ನು ತಯಾರಿಸುವ ಉದ್ದೇಶವನ್ನು ಹೊಂದಿದ್ದು, ಕರ್ನಾಟಕದ ಶಾಸಕರ ಮಾದರಿ ಮತ್ತು ಮಕ್ಕಳ ಹಕ್ಕುಗಳನ್ನು ಎತ್ತಿ ಹಿಡಿಯುವ ವಿನೂತನ ಪ್ರಯತ್ನಗಳು ಇತ್ತೀಚಿನ ವರ್ಷಗಳಲ್ಲಿ ಇತರೆ ರಾಜ್ಯಗಳಿಗೆ ಕಲಿಕೆಯಾಗಿ ಎಂದರು.

ಕಾರ್ಯಾಗಾರದ ಪ್ರಥಮ ಅಧಿವೇಶನದಲ್ಲಿ ಮಕ್ಕಳ ಹಕ್ಕುಗಳ ಆದ್ಯತೆ ಮತ್ತು ಪ್ರಾದೇಶಿಕ ಹೋಲಿಕೆ ಕುರಿತು ವಿಷಯ ಮಂಡಿಸಿದ ಯುನಿಸೆಫ್ ಮಾಜಿ ಪ್ರತಿನಿಧಿ ಮತ್ತು ಕೆ.ಸಿ.ಆರ್.ಒ. ಸಲಹಾ ಸಮಿತಿಯ ಸದಸ್ಯೆ ಡಾ. ಶ್ರೀಲಕ್ಷ್ಮೀ ಗುರುರಾಜ್ ಅವರು ಮಾತನಾಡಿ ಮಕ್ಕಳ ಹಕ್ಕು ವಿಶ್ವದೆಲ್ಲೆಡೆ ಒಂದೇ ರೀತಿಯಿದ್ದು, ಎಲ್ಲವೂ ಒಂದಕ್ಕೊಂದು ಅಂತರ್ ಅವಲಂಭಿತವಾಗಿದ್ದು ಎಲ್ಲಾ ಸರ್ಕಾರಗಳು ಮಕ್ಕಳ ಹಕ್ಕುಗಳನ್ನು ಗೌರವಿಸಬೇಕಿದೆ ಎಂದರು.

ಮಕ್ಕಳಿಗೆ ಮಾರಕರೋಗಗಳ ವಿರುದ್ಧ ಸಕಾಲದಲ್ಲಿ ಚುಚ್ಚುಮದ್ದು ನೀಡುವಿಕೆ ಮತ್ತು ಅಪೌಷ್ಠಿಕತೆಯಿಂದ ಮಕ್ಕಳನ್ನು ಹೊರಗಿಡುವುದು, ಭ್ರೂಣಹತ್ಯೆ ತಡೆ, ಅಕ್ರಮ ಕಳ್ಳಸಾಗಾಣಿಕೆ, ಅಪಾಯಕಾರಿ ಕೆಲಸಗಳಿಂದ ಮುಕ್ತಿ, ಉತ್ತಮ ಶಿಕ್ಷಣ, ಆರೋಗ್ಯ ಒದಗಿಸುವುದು ಸರ್ಕಾರ ಮತ್ತು ಪ್ರಜೆಗಳ ಕರ್ತವ್ಯವೆಂದರು.

ಸಾಮಾಜಿಕ ಕಾನೂನು ತಜ್ಞ ಮತ್ತು ಯುನಿಸೆಫ್‌ನ ಪ್ರತಿನಿಧಿ ಡಾ. ದೀಪಕ್‌ಕುಮಾರ್ ಡೇ ಅವರು ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಶಾಸಕರ ಪಾತ್ರ ಕುರಿತ ವಿಷಯದ ಬಗ್ಗೆ ಪರಿಣಾಮಕಾರಿ ಮಾಹಿತಿ ನೀಡಿದರು.

ಕಾರ್ಯಾಗಾರದಲ್ಲಿ ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಚೌಡರೆಡ್ಡಿ ತೂಪಲ್ಲಿ, ಮುಖ್ಯ ಸಚೇತಕರಾದ ಐವನ್ ಡಿ'ಸೋಜ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಎಸ್‌ಎಂ:ಎಂಆರ್‌ಎಂ::ಜಿಪಿಆರ್.

<u>ಸಂಖ್ಯೆ 64/191</u>

# "ಸಾವಯವ ಮತ್ತು ಸಿರಿಧಾನ್ಯ ಮೇಳ"

ಕೃಷಿ ಇಲಾಖೆ ಮತ್ತು ಜೈವಿಕ್ ಕೃಷಿಕ್ ಸೊಸೈಟಿ (ರಿ) ಇವರ ಸಹಯೋಗದಲ್ಲಿ ಸೆಪ್ಟೆಂಬರ್ 16 ಮತ್ತು 17 ರಂದು ಎರಡು ದಿನಗಳ ಕಾಲ ವಿವೇಕಾನಂದ ಆಟದ ಮೈದಾನ, ಮೋದಿ ಆಸ್ಪತ್ರೆ ರಸ್ತೆ, ಶಂಕರಮಠ ಸಿಗ್ನಲ್ ಮಹಾಲಕ್ಷ್ಮಿಪುರಂ, ಬೆಂಗಳೂರು "ಸಾವಯವ ಮತ್ತು ಸಿರಿದಾನ್ಯ ಮೇಳ" ವನ್ನು ಹಮ್ಮಿಕೊಂಡಿದೆ.

ಈ ಮೇಳದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಪ್ರಾಂತೀಯ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳು, ಸಾವಯವ ಮತ್ತು ಸಿರಿಧಾನ್ಯಗಳ ಸಗಟು ಮತ್ತು ಚಿಲ್ಲರೆ ಮಾರಾಟಗಾರರು ಭಾಗವಹಿಸಿ ಸಾವಯವ ಪದ್ಧತಿಯಲ್ಲಿ ಬೆಳೆದಿರುವ ತಾಜಾ ತರಕಾರಿಗಳೂ, ಸೊಪ್ಪು, ಹಣ್ಣುಗಳು ಹಾಗೂ ಪೌಷ್ಟಿಕಾಂಶಗಳಲ್ಲಿ ಹಿರಿದಾದ ಸಿರಿಧಾನ್ಯಗಳಾದ ರಾಗಿ, ನವಣೆ, ಬರಗು, ಹಾರಕ, ಸಾಮೆ, ಊದಲು ಮತ್ತು ಕೊರಲೆ ಕೆಂಪಕ್ಕಿ, ವಿವಿಧ ಔಷದೀಯ ಗುಣಗಳುಳ್ಳ ಕರಿಭತ್ತ, ನವರ ಅಕ್ಕಿ, ಸಾವಯವ ಬೆಲ್ಲ, ಪುಡಿ ಬೆಲ್ಲ, ಸಾಂಬಾರ ಪದಾರ್ಥಗಳು, ಸಂಸ್ಕರಿಸಿದ ವಿವಿಧ ಧಾನ್ಯದ ಹಿಟ್ಟುಗಳು, ಉಪ್ಪಿನಕಾಯಿ, ಜಾಮ್, ಜೆಲ್ಲಿಗಳು, ಮಸಾಲ ಪದಾರ್ಥಗಳು ಇನ್ನಿತರೆ ಹಲವಾರು ವೈವಿಧ್ಯತೆಗಳಿಂದ ಕೂಡಿದ ಆಹಾರ ಪದಾರ್ಥಗಳನ್ನು ಹರ್ಬಲ್ ಸೌಂಧರ್ಯವರ್ಧಕಗಳು ಇತ್ಯಾದಿ ಇವುಗಳನ್ನು ಮಾರಾಟ ಮಾಡಲಾಗುವುದು.

ಮೇಳದಲ್ಲಿ ಸುಮಾರು 50 ರಿಂದ 60 ಪ್ರದರ್ಶನ ಮಳಿಗೆಗಳನ್ನು ವ್ಯವಸ್ಥೆ ಮಾಡಲಾಗಿದ್ದು ಈ ಎರಡು ದಿನಗಳಂದು ಬೆಳಿಗ್ಗೆ 9 ರಿಂದ ಸಂಜೆ 8 ಗಂಟೆವರೆಗೆ ಪ್ರದರ್ಶನ ಮಳಿಗೆಗಳು ತೆರೆದಿರುತ್ತವೆ. ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಈ ಮೇಳದ ಸದುಪಯೋಗ ಪಡೆಯುವಂತೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

**ಸಂಖ್ಯೆ 65/191**

## ಅಂತಿಮ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 14 ( ಕರ್ನಾಟಕ ವಾರ್ತೆ) :**

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ಇಲಾಖೆಯ ಮಹಾನಗರಪಾಲಿಕೆಗಳಲ್ಲಿ ಕರ ವಸೂಲಿಗಾರರು –286 (266+20 ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಸೆಪ್ಟೆಂಬರ್ 13 ರಂದು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

**ಸಂಖ್ಯೆ 66/192**

## ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಂದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 14 ( ಕರ್ನಾಟಕ ವಾರ್ತೆ) :**

ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ 15 ವ್ಯಕ್ತಿಗಳು, ವಿಕಲಚೇತನರ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ 8 ಸಂಸ್ಥೆಗಳು, ವಿಶಿಷ್ಟ ಸಾಧನೆಗೈದಿರುವ 2 ಸಂಸ್ಥೆಗಳು ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸುತ್ತಿರುವ/ಸಲ್ಲಿಸಿರುವ ವಿಶೇಷ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ. ಈ ಎಲ್ಲಾ ಪ್ರಶಸ್ತಿಗಳಿಗೆ ಅರ್ಹ ವ್ಯಕ್ತಿಗಳು, ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಿಸಲಾಗಿದೆ.

ಆಸಕ್ತರು ಅರ್ಜಿಗಳನ್ನು ತಮ್ಮ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಅಥವಾ ಇಲಾಖೆಯ ವೆಬ್‌ಸೈಟ್‌ನಿಂದ ಪಡೆಯಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಸೆಪ್ಟೆಂಬರ್ 25 ರೊಳಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಕಚೇರಿಗೆ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ನಿರ್ದೇಶನಾಲಯಕ್ಕೆ ನೇರವಾಗಿ ಸಲ್ಲಿಸಬಾರದೆಂದೂ ಒಂದು ವೇಳೆ ಹಾಗೇನಾದರೂ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲವೆಂದೂ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ http://www.welfareofdisabled.kar.nic.in / www.dwdsc.kar.nic.in ವೀಕ್ಷಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 67/193

## ಪರಿಶಿಷ್ಟ ಜಾತಿ/ಪಂಗಡದ ಪತ್ರಿಕೋದ್ಯಮ ಪದವೀದರ ಅಭ್ಯರ್ಥಿಗಳಿಗೆ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 14(ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ, ಪಿ.ಜಿ. ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗಾಗಿ ಆರು ದಿವಸಗಳ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ಇಲಾಖೆಯ ವೆಬ್‌ಸೈಟ್ www.karnatakainformation.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಹಾಗೂ ವಿಶೇಷ

ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 21-9-2017 ರ ಸಂಜೆ 5-00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.

ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080- 22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

<u>ಸಂಖ್ಯೆ 68/194</u>

## <u>ಹಿಂದುಳಿದ ವರ್ಗದ ಪತ್ರಿಕೋದ್ಯಮ ಪದವಿದರ ಅಭ್ಯರ್ಥಿಗಳಿಗೆ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನ</u>

<u>ಬೆಂಗಳೂರು ಸೆಪ್ಟೆಂಬರ್ 14(ಕರ್ನಾಟಕ ವಾರ್ತೆ)</u>

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿಂದುಳಿದ ವರ್ಗದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ, ಪಿ.ಜಿ. ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗಾಗಿ ಆರು ದಿವಸಗಳ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.

ಕೆಟಗರಿ 1, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ಇಲಾಖೆಯ ವೆಬ್‌ಸೈಟ್ www.karnatakainformation.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಹಾಗೂ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಮತ್ತು ವಿಶೇಷ ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 3–10–2017 ರ ಸಂಜೆ 5–00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.

ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ (ಹಿಂದುಳಿದ ವರ್ಗ)" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080–22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

<u>ಸಂಖ್ಯೆ 69/195</u>

## ಕಾಲೇಜು ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆಗಳು

ಬೆಂಗಳೂರು ಸೆಪ್ಟೆಂಬರ್ 14(ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ವತಿಯಿಂದ 2017–18 ನೇ ಸಾಲಿನಲ್ಲಿ ಕಾಲೇಜು ವಿದ್ಯಾರ್ಥಿ–ವಿದ್ಯಾರ್ಥಿನಿಯರುಗಳಲ್ಲಿ ಇರುವ ಕಲೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಇಲಾಖೆ ವತಿಯಿಂದ ಕಾಲೇಜು ರಂಗೋತ್ಸವ ಯೋಜನೆಯಡಿ ಮೂಲ ಜಾನಪದ ಪ್ರದರ್ಶನ ಕಲೆಗಳು/ನಾಟಕ ಸ್ಪರ್ಧೆಗಳನ್ನು ಕಾಲೇಜು ವಿದ್ಯಾರ್ಥಿಗಳಿಗಾಗಿ ಜಿಲ್ಲಾ ಮಟ್ಟದ, ವಿಭಾಗ ಮಟ್ಟದ ಹಾಗೂ ರಾಜ್ಯ ಮಟ್ಟದ ಸ್ಪರ್ಧೆಗಳನ್ನು ಏರ್ಪಡಿಸಿದೆ.

ಆಸಕ್ತ ಕಾಲೇಜು ವಿದ್ಯಾರ್ಥಿಗಳು ತಮ್ಮ ಕಾಲೇಜಿನ ಪ್ರಾಂಶುಪಾಲರ ಮುಖಾಂತರ ವಿವರವನ್ನು ಆಯಾ ಜಿಲ್ಲಾ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಆಡಳಿತಾಧಿಕಾರಿಗಳು ರಂಗಾಯಣ ಶಿವಮೊಗ್ಗ, ಧಾರವಾಡ, ಮೈಸೂರು ಹಾಗೂ ಕಲಬುರಗಿ ರಂಗಾಯಣ ಅವರಿಗೆ ದಿನಾಂಕ 28–9–2017 ರ ಒಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲಾ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಆಡಳಿತಾಧಿಕಾರಿಗಳು ರಂಗಾಯಣ ಶಿವಮೊಗ್ಗ, ಧಾರವಾಡ, ಮೈಸೂರು ಹಾಗೂ ಕಲಬುರಗಿ ರಂಗಾಯಣ ಅವರಿಗೆ ಸಂಪರ್ಕಿಸಬಹುದಾಗಿದೆ. ದೂರವಾಣಿ ಸಂಖ್ಯೆ : 1. ರಂಗಾಯಣ ಶಿವಮೊಗ್ಗ 078182 –256353. 2. ರಂಗಾಯಣ ಮೈಸೂರು 0821–

2512639/29 3. ರಂಗಾಯಣ ಧಾರವಾಡ 0836–2441706 4. ರಂಗಾಯಣ ಕಲಬುರಗಿ 08472–227734/ 35 ನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

ಸಂಖ್ಯೆ 70/196

## "ಕಾವೇರಿ ಪುಷ್ಕರ" ಒಂದು ದಿನದ ಪ್ರವಾಸ

ಬೆಂಗಳೂರು ಸೆಪ್ಟೆಂಬರ್ 14(ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಸಾರಿಗೆ ವಿಭಾಗದಿಂದ ವ್ಯವಸ್ಥಿತ ಪ್ರವಾಸದಲ್ಲಿ ದಿನಾಂಕ 15–9–2017 ರಿಂದ "ಕಾವೇರಿ ಪುಷ್ಕರ" ಪ್ರಯುಕ್ತ ಒಂದು ದಿನದ ಪ್ರವಾಸವನ್ನು ಏರ್ಪಡಿಸಲಾಗಿದೆ.

ಪ್ರತಿ ದಿನ ಬೆಂಗಳೂರಿನಿಂದ ಮುಂಜಾನೆ 6–30 ಕ್ಕೆ ಹೊರಟು ಶ್ರೀರಂಗಪಟ್ಟಣ, ನಿಮಿಷಾಂಬ ದೇವಿ, ಕಾವೇರಿ ನದಿಯಲ್ಲಿ ಸ್ನಾನ ಮುಗಿಸಿ ರಾತ್ರಿ 8–00 ಗಂಟೆಗೆ ಹಿಂತಿರುಗಲಾಗುವುದು. ಈ ಪ್ರವಾಸಕ್ಕೆ ಒಬ್ಬರಿಗೆ ರೂ. 600/– ದರ ನಿಗದಿಪಡಿಸಲಾಗಿದೆ.

ಅಕ್ಟೋಬರ್ ತಿಂಗಳಿನಿಂದ ಗೋವಾ ಪ್ರವಾಸ, ಉತ್ತರ ಕರ್ನಾಟಕ ಪ್ರವಾಸ ಮತ್ತು ಶ್ರೀ ಶೈಲ, ಮಹಾನಂದಿ, ಹೈದರಾಬಾದ್ ಪ್ರವಾಸಗಳನ್ನೂ ಸಹ ಪ್ರಾರಂಭಿಸಲಾಗುತ್ತಿದೆ. ಈ ಪ್ರವಾಸಗಳ ವಿವರಗಳಿಗೆ www.kstdc.co ವೆಬ್‌ಸೈಟ್ ಅಥವಾ ದೂರವಾಣಿ ಸಂಖ್ಯೆ 8970650070, 080–43344334 ಗಳನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.